ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:54:ಸುತ್ತೋಲೆ:2021-22/ತವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:16.01.2023.
19

ಇವರಿಗೆ,

ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ,
ಬೆಂಗಳೂರು/ಮೈಸೂರು/ಧಾರವಾಡ
ಶಿವಮೊಗ್ಗ/ಮಂಗಳೂರು/ಗುಲ್ಬರ್ಗಾ.

ಮಾನ್ಯರೇ,

ವಿಷಯ: ಸರ್ಕಾರದ ಅಧಿಸೂಚನೆ / ಸುತ್ತೋಲೆಗಳನ್ನು ಪರಿಚಲಿಸುವ ಬಗ್ಗೆ.

** ** **

ಸರ್ಕಾರದಿಂದ ಜಾರಿಗೊಳಿಸಿರುವ/ಹೊರಡಿಸಲಾಗಿರುವ ಈ ಕೆಳಕಂಡ ಆದೇಶ/ ಸುತ್ತೋಲೆ/ ಅಧಿಸೂಚನೆಗಳನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದ್ದು, ಅಗತ್ಯತೆ ಅನುಸಾರ ಇವುಗಳನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ ಪರಿಚಲಿಸುವಂತೆ ಸೂಚಿಸಲಾಗಿದೆ.

| ಕ್ರ.ಸಂ | ಪತ್ರಸಂಖ್ಯೆ | ವಿಷಯ |
|---|---|---|
| 01 | ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 215 ಸೇನೇನಿ 2022, ಬೆಂಗಳೂರು, ದಿನಾಂಕ:21.12.2022. | ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ 1978(1990ರ ಕರ್ನಾಟಕ ಅಧಿನಿಯಮ 14)ರ 8ನೇ ಪ್ರಕರಣದೊಂದಿಗೆ ಓದಲಾದ 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಕರ್ನಾಟಕ ನಾಗರಿಕ ಸೇವಾ(ಸಾಮಾನ್ಯ ನೇಮಕಾತಿ) ನಿಯಮಗಳು, 1977ನ್ನು ಮತ್ತಷ್ಟು ತಿದ್ದುಪಡಿ ಮಾಡುವ ಕುರಿತು. |

ಅಡಕ:ಮೇಲಿನಂತೆ

ತಮ್ಮ ವಿಶ್ವಾಸಿ,
19/01/2023
ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ.
2. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ.

ತನಿಖೆ 06 JAN 2023

5286658
7/1/2023

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಸಿಆಸುಇ 215 ಸೇನೆನಿ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:21.12.2022.

## <u>ಅಧಿಸೂಚನೆ</u>

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ 1978 (1990ರ ಕರ್ನಾಟಕ ಅಧಿನಿಯಮ 14)ರ 8ನೇ ಪ್ರಕರಣದೊಂದಿಗೆ ಓದಲಾದ 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ನ್ನು ಮತ್ತಷ್ಟು ತಿದ್ದುಪಡಿ ಮಾಡಲು, ಕರ್ನಾಟಕ ಸರ್ಕಾರವು ರಚಿಸಲು ಉದ್ದೇಶಿಸಿರುವ ಈ ಕೆಳಕಂಡ ನಿಯಮಗಳ ಕರಡನ್ನು ಸದರಿ ಅಧಿನಿಯಮದ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅದರಲ್ಲಿ ಅಗತ್ಯಪಡಿಸಲಾದಂತೆ ಅದರಿಂದ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ ಹಾಗೂ ಸದರಿ ಕರಡು ನಿಯಮಗಳನ್ನು ಅಧಿಕೃತ ರಾಜ್ಯಪತ್ರದಲ್ಲಿ ಅವುಗಳ ಪ್ರಕಟಣೆಯ ದಿನಾಂಕದಿಂದ ಹದಿನೈದು ದಿನಗಳ ತರುವಾಯ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ಮೇಲೆ ನಿರ್ದಿಷ್ಟಪಡಿಸಿದ ಅವಧಿಯು ಮುಕ್ತಾಯವಾಗುವುದಕ್ಕೆ ಮೊದಲು ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ, ಯಾರೇ ವ್ಯಕ್ತಿಯಿಂದ ಸ್ವೀಕರಿಸುವ ಯಾವುದೇ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸುತ್ತದೆ. ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು-560001 ಇವರಿಗೆ ಸಲ್ಲಿಸತಕ್ಕದ್ದು.

## <u>ಕರಡು ನಿಯಮಗಳು</u>

1. <u>ಶೀರ್ಷಿಕೆ ಮತ್ತು ಪ್ರಾರಂಭ:-</u> (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು, 2022 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

..2..

ವಿಭಾಗದಲ್ಲಿ ಸ್ವೀಕರಿಸಿದ ದಿನಾಂಕ: 13/01/2023

2. <u>ನಿಯಮ 16-A ಅನ್ನು ಸೇರ್ಪಡೆಗೊಳಿಸುವ ಬಗ್ಗೆ:-</u> ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 16ರ ನಂತರ ಈ ಕೆಳಕಂಡಂತೆ ಸೇರಿಸತಕ್ಕದ್ದು ಎಂದರೆ :-

<u>"16-ಎ. ಸೇವೆಯೊಳಗೆ ವರ್ಗಾವಣೆ ಮೂಲಕ ನೇಮಕ ಮಾಡುವುದು.-</u>

ಈ ನಿಯಮಗಳಲ್ಲಿ ಅಥವಾ ಯಾವುದೇ ಸೇವೆಯ ಅಥವಾ ಹುದ್ದೆಯ ಸಂಬಂಧದಲ್ಲಿ ರಚಿಸಲಾದ ವಿಶೇಷ ನೇಮಕಾತಿ ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ ಒಬ್ಬ ಇಲಾಖಾ ಮುಖ್ಯಸ್ಥರು ಸೇವೆಗೆ ಸಂಬಂಧಿಸಿದಂತೆ ಕಾರಣಗಳನ್ನು ಲಿಖಿತದಲ್ಲಿ ದಾಖಲಿಸಿ ಮತ್ತು ಈ ಬಗ್ಗೆ ಸರ್ಕಾರವು ಹೊರಡಿಸುವ ಸಾಮಾನ್ಯ ಸೂಚನೆಗಳಿಗೆ ಒಳಪಟ್ಟು, ಪತಿ-ಪತ್ನಿ ಇಬ್ಬರೂ ಸರ್ಕಾರಿ ಸೇವೆಯಲ್ಲಿರುವ ಪ್ರಕರಣಗಳಲ್ಲಿ ಮಾತ್ರ ಗುಂಪು-ಸಿ ಅಥವಾ ಗುಂಪು-ಡಿ ಸೇವೆಗೆ ಸೇರಿದ ಒಬ್ಬ ಸದಸ್ಯರನ್ನು, ಮತ್ತು ಈ ನಿಯಮಗಳಡಿ ಪತಿ ಅಥವಾ ಪತ್ನಿ ಇವರಲ್ಲಿ ಯಾರಾದರೊಬ್ಬರಿಂದ ಕೋರಿಕೆ ಬಂದಲ್ಲಿ, ಹುದ್ದೆಯ ಒಂದು ಜೇಷ್ಠತಾ ಘಟಕದಿಂದ ಮತ್ತೊಂದು ಜೇಷ್ಠತಾ ಘಟಕದಲ್ಲಿನ ಅದೇ ಕೇಡರ್‌ನ ಸಮಾನ ಹುದ್ದೆಗೆ ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ವರ್ಗಾವಣೆ ಮೂಲಕ ನೇಮಕ ಮಾಡಬಹುದು. ಅವುಗಳೆಂದರೆ:-

i) ಒಬ್ಬ ಸರ್ಕಾರಿ ನೌಕರನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ಕನಿಷ್ಟ 7 ವರ್ಷ ಸೇವೆಯನ್ನು ಪೂರ್ಣಗೊಳಿಸಿರಬೇಕು.

ii) ವರ್ಗಾಯಿಸಬೇಕಾದ ಘಟಕ ಅಥವಾ ಸ್ಥಳದಲ್ಲಿ ಮಂಜೂರಾದ ಹುದ್ದೆಯು ಖಾಲಿಯಿರತಕ್ಕದ್ದು.

iii) ಅಂತಹ ವರ್ಗಾವಣೆಯನ್ನು ಒಂದು ಕೇಡರ್‌ನಿಂದ ಮತ್ತೊಂದು ಕೇಡರಿಗೆ ಮಾಡತಕ್ಕದ್ದಲ್ಲ.

<u>ಟಿಪ್ಪಣಿ:</u> ಈ ನೇಮಕಾತಿಯನ್ನು ಸರ್ಕಾರಿ ನೌಕರರ ಕೋರಿಕೆಯ ಮೇರೆಗೆ ಮಾಡುವುದರಿಂದ ಅವರ ಜೇಷ್ಠತೆಯನ್ನು ವರ್ಗಾವಣೆಗೊಂಡ ಘಟಕದಲ್ಲಿನ ಕೇಡರ್‌ನ ಕೊನೆಯ ವ್ಯಕ್ತಿಯ ಕೆಳಗಿರಿಸತಕ್ಕದ್ದು.

..3..

**ವಿವರಣೆ:** ಈ ನಿಯಮದ ಉದ್ದೇಶಕ್ಕಾಗಿ "ಜೇಷ್ಠತಾ ಘಟಕ ಎಂದರೆ ಒಂದು ಹುದ್ದೆಗೆ ಸಂಬಂಧಿಸಿದಂತೆ ನೇಮಕಾತಿ ಪ್ರಾಧಿಕಾರದ ಕಾರ್ಯವ್ಯಾಪ್ತಿ".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ವೀರಭದ್ರ 21-12-2022
(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:

ಸಂಕಲನಕಾರರು, ಇ-ಗೆಜೆಟ್.

ಪ್ರತಿ:

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು.
5. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು
6. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
7. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
8. *ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ನವದೆಹಲಿ.
9. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು.
15. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಪ್ರಾದೇಶಿಕ ಆಯುಕ್ತರು.
16. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್/ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
17. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ) (ವಿಷಯ ಸಂಖ್ಯೆ:626/2022)
18. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

(*ಮುಖ ಪತ್ರದೊಂದಿಗೆ)

## GOVERNMENT *OF KARNATAKA*

No. DPAR 215 SRR 2022

Karnataka Government Secretariat,
Vidhana Soudha,
Bengaluru, Dated:21.12.2022.

## NOTIFICATION

The draft of the following rules further to amend the Karnataka Civil Services (General Recruitment) Rules, 1977 which the Government of Karnataka proposes to make in exercise of the powers conferred by sub-section (1) of section 3, read with section 8 of the Karnataka State Civil Services Act, 1978 (Karnataka Act 14 of 1990) is hereby published as required by clause (a) of sub-section (2) of section (3) of the said Act, for the information of all persons likely to be affected thereby and notice is hereby given that the said draft will be taken into consideration after fifteen days from the date of its publication in the Official Gazette.

Any objection or suggestion which may be received by the State Government from any person with respect to the said draft before the expiry of the period specified above will be considered by the State Government. Objections or suggestions may be addressed to the Secretary to Government, Department of Personnel and Administrative Reforms, Vidhana Soudha, Bengaluru-560001.

## DRAFT RULES

1. Title and commencement.- (1) These rules may be called the Karnataka Civil Services (General Recruitment) (Amendment) Rules, 2022.

(2) They shall come into force from the date of their final publication in the Official Gazette.

2. Insertion of Rule 16-A.- In the Karnataka Civil Services (General Recruitment) Rules, 1977, after Rule 16, Rule 16-A shall be inserted, namely:-

"16-A. Appointment by transfer within the service.- Notwithstanding anything contained in these rules or the rules of recruitment specially made in respect of any service or post, a Head of the Department in respect of service for reasons to be recorded in writing and subject to any general instructions that may be issued by the Government in this behalf appoint by transfer a member of a Group-C or Group-D service only in such cases where both husband and wife are in Government service and a request for transfer under this rule is made by a spouse, from a post in one unit of seniority to an identical post in the same cadre in another unit of seniority subject to the following conditions, namely :-

(i) A Government servant shall have completed minimum seven years of service in present place of working.

(ii) Sanctioned post shall be vacant in the unit or place to be transferred.

(iii) Such transfer shall not be permissible from one cadre to another cadre.

Note: Since the appointment being made at the request of the Government servant his seniority shall be placed below that of the last person in the cadre of the transferred unit.

**Explanation:-** For the purpose of this rule "Unit of Seniority means the jurisdiction of the appointing authority in respect of a post."

By Order and in the name of the
Governor of Karnataka,

24-12-2022
(Veerabhadra)
Under Secretary to Government,
Department of Personnel & Administrative Reforms,
(Service Rules-1).

To,

The Compiler, E-Gazette.

Copy to:

1. The Principal Accountant General (G&SSI) & (E&RSA), Karnataka, New Building, Audit Bhavan, Bengaluru- 560001.
2. The Principal Accountant General (A&E) Karnataka, Park House Road, Bengaluru-560001.
3. The Chief Secretary to Government.
4. All Additional Chief Secretaries to Government.
5. The Principal Secretary to Hon'ble Chief Minister.
6. The Principal Secretary to Hon'ble Governor.
7. All Principal Secretaries / Secretaries to Government.
8. *The Resident Commissioner, Karnataka Bhavan New Delhi.
9. *The Secretary, Karnataka Legislative Assembly / Council.
10. *The Registrar General, High Court of Karnataka, Bengaluru.

11. *The Secretary, Karnataka Public Service Commission, Bengaluru.
12. *The Registrar, Karnataka Lokayukta, Bengaluru.
13. *The Registrar, Karnataka State Administrative Tribunal, 6th & 7th Floor, Kandaya Bhavan, K.G. Road, Bengaluru-560009.
14. *The Registrar, Karnataka Appellate Tribunal, M.S. Building, Bengaluru.
15. All Heads of Departments & All Regional Commissioners.
16. All Deputy Commissioners of Districts/Chief Executive Officers of Zilla Panchayats/ All Superintendent of Police of Districts.
17. Deputy Secretary to Government (Cabinet) (Subject No: C:626/2022).
18. All Special / Additional / Joint / Deputy / Under Secretaries to Government.
19. All Sections of Karnataka Government Secretariat.
20. Section Guard File / Weekly Gazette / Spare copies

(*with Covering Letter)